# ಸಮಗ್ರ ಶಿಕ್ಷಣ - ಕರ್ನಾಟಕ

ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ಪೂರಕ ಕಟ್ಟಡ,
ನೃಪತುಂಗ ರಸ್ತೆ, ಬೆಂಗಳೂರು-01.


ದಿನಾಂಕ: 09.04.2026

ಸಂಖ್ಯೆ: SSK/ಕೆ.ಪಿ.ಎಸ್/ಎಂಸಿ&ಎ/2026-27

**-: ಸುತ್ತೋಲೆ:-**

**ವಿಷಯ**: ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ 'ಪೋಷಕರ ಧ್ವನಿ' ಬಗ್ಗೆ ಮಾಹಿತಿ ನೀಡುವ ಕುರಿತು.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಎಲ್ಲಾ ಎಸ್.ಡಿ.ಎಂ.ಸಿ ಸದಸ್ಯರು ಹಾಗೂ ಪೋಷಕರಿಂದ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣವನ್ನು ಉತ್ತಮಗೊಳಿಸುವ ಸಂಬಂಧ ಸೂಕ್ತ ಸಲಹೆಗಳನ್ನು ಪಡೆಯಲು "ಪೋಷಕರ ಧ್ವನಿ ಪೆಟ್ಟಿಗೆ" (Parents' Voice Box)ಯನ್ನು ಸಜ್ಜುಗೊಳಿಸಬೇಕು. ಪೋಷಕರು ತಮ್ಮ ಅಭಿಪ್ರಾಯಗಳನ್ನು ಲಿಖಿತ ರೂಪದಲ್ಲಿ ನೀಡಿ, ಪೆಟ್ಟಿಗೆಯಲ್ಲಿ ಹಾಕುವಂತೆ ಮಾರ್ಗದರ್ಶನ ನೀಡುವುದು.

ಈ ಹಿನ್ನಲೆಯಲ್ಲಿ ಈ ಪತ್ರದ ಜೊತೆ ಲಗತ್ತಿಸಿರುವ ಪೋಷಕರ ಧ್ವನಿ ಕರಪತ್ರವನ್ನು ಶಾಲೆಯ ನೋಟೀಸ್ ಬೋರ್ಡ್ ನಲ್ಲಿ ಪ್ರದರ್ಶಿಸುವುದು. ಅಲ್ಲದೆ ಎಲ್ಲಾ ಎಸ್.ಡಿ.ಎಂ.ಸಿ ಸದಸ್ಯರು ಹಾಗೂ ಪೋಷಕರು ತಮ್ಮ ಅಭಿಪ್ರಾಯಗಳನ್ನು ಆನ್‌ಲೈನ್ ಮುಖಾಂತರವೂ ಕಳುಹಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿ, ಈ ಕೆಳಗಿನ ಸಂಪರ್ಕ ವಿವರಗಳನ್ನು ಒದಗಿಸಿವುದು.

**ಸಂಪರ್ಕ ವಿವರಗಳು:**

- ವಾಟ್ಸ್‌ಆಪ್ ಸಂಖ್ಯೆ: 9448999314
- ಇಮೇಲ್ ಐಡಿ: edkarnataka@gmail.com

ಪೋಷಕರ ಧ್ವನಿ ಕರಪತ್ರವನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದೆ.

ರಾಜ್ಯ ಯೋಜನಾ ನಿರ್ದೇಶಕರು
ಸಮಗ್ರ ಶಿಕ್ಷಣ ಕರ್ನಾಟಕ

09/04/2026

**ಅಗತ್ಯ ಕ್ರಮಕ್ಕಾಗಿ.**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) ,(ಅಭಿವೃದ್ಧಿ) ರವರಿಗೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ರವರಿಗೆ.
3. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢ ಶಾಲೆ ಮತ್ತು ಪ್ರಾಥಮಿಕ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ.

**ಮಾಹಿತಿಗಾಗಿ.**

1. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಸಲ್ಲಿಸಿದೆ.
3. ಅಪರ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲುಬುರ್ಗಿ ರವರಿಗೆ ಸಲ್ಲಿಸಿದೆ.